ಅ) ವಿದ್ಯಾರ್ಥಿನಿಗಳ ಸಂಖ್ಯೆಗೆ ಅನುಗುಣವಾಗಿ, ಕೊಠಡಿಗಳಿಲ್ಲದೆ ಪ್ರಸ್ತುತದ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿನಿಯರಿಗೆ ಪ್ರಥಮ ಪಿ.ಯು.ಸಿಗೆ. ಅನುಮತಿಯನ್ನು ನಿರಾಕರಿಸುತ್ತಾ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕಟ್ಟಡದ ದುರಸ್ತಿಗಾಗಿ ಹಾಗೂ ಹೆಚ್ಚುವರಿ ಕೊಠಡಿಗಳ ಸೌಲಭ್ಯ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಪ್ರೋ ಬಿ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು) :

ಅ) ಗಮನಿಸಿದೆ.

ಆ) ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಕೊಠಡಿಗಳು ಸದರಿ ಕಾಲೇಜಿನಲ್ಲಿ ಇದುವರೆವಿಗೂ ಇದ್ದವು. (08 ಬೋಧನಾ ಕೊಠಡಿಗಳು, 03 ಪ್ರಯೋಗಾಲಯ ಕೊಠಡಿಗಳು ಹಾಗೂ 01 ಸಿಬ್ಬಂದಿ ಕೊಠಡಿ ವ್ಯವಸ್ಥೆ ಇರುತ್ತದೆ). ಆದರೆ ಈ ಕಾಲೇಜಿನ ಪಕ್ಕದಲ್ಲೇ ಇದ್ದ ಬಾಲಕಿಯರ ಪದವಿ ಪೂರ್ವ ಕಾಲೇಜಿನಿಂದ ಪದವೀ ಪೂರ್ವ ವಿಭಾಗವನ್ನು 2001-2002ನೇ ಸಾಲಿನಲ್ಲಿ ಬೇರ್ಪಡಿಸಿದ್ದು, ಅಲ್ಲಿದ್ದ ವಿದ್ಯಾರ್ಥಿಯರನ್ನು ಈ ಕಾಲೇಜಿಗೆ ವರ್ಗಾಯಿಸಿದ್ದುದರಿಂದ ಈ ಸಮಸ್ಯೆ ಉದ್ಭವಿಸಿರುತ್ತದೆ.

ಇ) ಈ ಕಾಲೇಜಿಗೆ ಹೆಚ್ಚುವರಿ 10 ಬೋಧನಾ ಕೊಠಡಿಗಳ ಅವಶ್ಯಕತೆಯಿದ್ದು. ಈ ಕೊಠಡಿಗಳ ನಿರ್ಮಾಣಕ್ಕೆ ಅಂದಾಜು ರೂ. 25.00 ಲಕ್ಷಗಳು ಬೇಕಾಗಿದ್ದು ರಾಜ್ಯದ ಅನುದಾನದ ಲಭ್ಯತೆಯನ್ನಾಧರಿಸಿ ಕೊಠಡಿಗಳ ನಿರ್ಮಾಣದ ಕಾರ್ಯವನ್ನು ಶೀಘ್ರವಾಗಿ ಕೈಗೊಳ್ಳಲಾಗುವುದು. ಈ ಕಟ್ಟಡದ ದುರಸ್ತಿ ಕಾರ್ಯವನ್ನು ಪ್ರಾರಂಭಿಸಿದ್ದು, ಸಧ್ಯದಲ್ಲೇ ಮುಗಿಯಲಿದೆ.

ಮಂಡ್ಯ ಜಿಲ್ಲೆಯಲ್ಲಿ ರಾಜೀವ್‌ಗಾಂಧಿ ಟೆಕ್ನಾಲಜಿ ಮಿಷನ್ ಅಡಿ ಕುಡಿಯುವ ನೀರಿನ ಯೋಜನೆ

1166 (1601) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯಲ್ಲಿ "ರಾಜೀವ್ ಗಾಂಧಿ ಟೆಕ್ನಾಲಜಿ ಮಿಷನ್" ಅಡಿಯಲ್ಲಿ ಕುಡಿಯುವ ನೀರಿನ ಯೋಜನೆಯನ್ನೇನಾದರೂ ಸಿದ್ದಪಡಿಸಲಾಗಿದೆಯೆ;

ಆ) ಸಿದ್ದಪಡಿಸಿದ್ದಲ್ಲಿ, ಅದರ ವಿವರಗಳೇನು?

ಶ್ರೀ ಕೆ.ಬಿ. ಕೋಳಿವಾಡ್ (ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು) :

ಅ) ಮಂಡ್ಯ ಜಿಲ್ಲೆಯಲ್ಲಿ, ಕುಡಿಯುವ ನೀರಿನಲ್ಲಿ ಗುಣಮಟ್ಟ ಸಮಸ್ಯೆಯಿರುವಂತಹ ಗ್ರಾಮಗಳಿಗೆ ಸುರಕ್ಷಿತ ಕುಡಿಯುವ ನೀರಿನ ಪೂರೈಕೆಗಾಗಿ ಸಬ್-ಮಿಷನ್ ಕಾರ್ಯಕ್ರಮದಡಿ 7 ಪರಿಕಲ್ಪಿತ ವಿನ್ಯಾಸ ವರದಿಗಳನ್ನು ಸಿದ್ದಪಡಿಸಲಾಗಿದೆ.

ಆ) ವಿವರಗಳನ್ನು ಅನುಬಂಧ-1 ರಲ್ಲಿ ನೀಡಲಾಗಿದೆ.

ಅನುಬಂಧ-1

ಕ್ರಮ ಸಂಖ್ಯೆ	ಪರಿಕಲ್ಪಿತ ವಿನ್ಯಾಸ ವರದಿಯ ವಿವರ	ಅಂದಾಜು ಮೊತ್ತ
1	ಮಂಡ್ಯ ಜಿಲ್ಲೆ ಮಂಡ್ಯ ತಾಲ್ಲೂಕಿನ ಬೇವಕಲ್ ಮತ್ತು ಇತರ 17 ಗ್ರಾಮಗಳಿಗೆ ನೀರು ಸರಬರಾಜು ಯೋಜನೆ	310.00

1	2	3
2	ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕಿನ ಕೆ-ಬೇಲೂರು ಮತ್ತು ಇತರ 9 ಗ್ರಾಮಗಳಿಗೆ ನೀರು ಸರಬರಾಜು ಯೋಜನೆ	423.00
3	ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕಿನ ತಗ್ಗಲ್ಲಿ ಮತ್ತು ಇತರ 36 ಗ್ರಾಮಗಳಿಗೆ ನೀರು ಸರಬರಾಜು ಯೋಜನೆ	1160.00
4	ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕಿನ ಮಾಲದದೊಡ್ಡಿ ಮತ್ತು ಇತರ 27 ಗ್ರಾಮಗಳಿಗೆ ನೀರು ಸರಬರಾಜು ಯೋಜನೆ	1530.00
5	ಮಂಡ್ಯ ಜಿಲ್ಲೆ ಮಳವಳ್ಳಿ ತಾಲ್ಲೂಕಿನ ಬಿ.ಜಿ.ಪುರ ಮತ್ತು ಇತರ 58 ಗ್ರಾಮಗಳಿಗೆ ನೀರು ಸರಬರಾಜು ಯೋಜನೆ	1737.77
6	ಮಂಡ್ಯ ಜಿಲ್ಲೆ ಮಳವಳ್ಳಿ ಮತ್ತು ಮದ್ದೂರು ತಾಲ್ಲೂಕಿನ ನೆಟ್ಕಲ್ ಮತ್ತು ಇತರ 4 ಗ್ರಾಮಗಳಿಗೆ ನೀರು ಸರಬರಾಜು ಯೋಜನೆ	322.29
7	ಮಂಡ್ಯ ಜಿಲ್ಲೆ ಮಳವಳ್ಳಿ ಮತ್ತು ಮದ್ದೂರು ತಾಲ್ಲೂಕಿನ ಕಿರುಗಾವಲು ಮತ್ತು ಇತರ 59 ಗ್ರಾಮಗಳಿಗೆ ನೀರು ಸರಬರಾಜು ಯೋಜನೆ	2618.28
	ಒಟ್ಟು	8096.34

ಕೆಹೆಚ್ಎಸ್‌ಡಿಪಿ ಅನ್ವಯ ರಾಜ್ಯದ ಮತ್ತು ಮಂಡ್ಯ ಜಿಲ್ಲಾ ಆಸ್ಪತ್ರೆಯ ಅಭಿವೃದ್ಧಿ ಕಾಮಗಾರಿ

1167 (1603) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೆಹೆಚ್ಎಸ್‌ಡಿಪಿ ಅನ್ವಯ ರಾಜ್ಯದಲ್ಲಿನ ಆಸ್ಪತ್ರೆಗಳನ್ನು ಸುಧಾರಿಸಿ, ಅಭಿವೃದ್ಧಿಪಡಿಸಲು, ವಿನಿಯೋಗಿಸಿರುವ ಮೊತ್ತವೆಷ್ಟು?

ಆ) ಕೆಹೆಚ್ಎಸ್‌ಡಿಪಿ ಅನ್ವಯ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿ ಪೂರ್ಣಗೊಂಡಿದೆಯೇ (ಇದರ ವಿವರ ನೀಡುವುದು)

ಇ) ಹಾಗಿದ್ದಲ್ಲಿ, ಮಂಡ್ಯ ಜಿಲ್ಲಾ ಆಸ್ಪತ್ರೆಯಲ್ಲಿ ಈ ಯೋಜನೆಯಡಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿ ತೀರ ಮಂದಗತಿಯಲ್ಲಿ ಸಾಗುತ್ತಾ ಇದ್ದು, ಬಹುತೇಕ ಸ್ಥಗಿತಗೊಂಡಿರುವ ಹಂತಕ್ಕೆ ತಲುಪಿರುವುದನ್ನು ಸರ್ಕಾರವು ಮನಗಂಡಿದೆಯೇ?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನೆಯಡಿ ರಾಜ್ಯದಲ್ಲಿಯ ಆಸ್ಪತ್ರೆಗಳ ಸುಧಾರಣೆ ಮತ್ತು ಅಭಿವೃದ್ಧಿಗಾಗಿ ವಿನಿಯೋಗಿಸಲು ಉದ್ದೇಶಿಸಿರುವ ಮೊತ್ತ ರೂ. 594.90 ಕೋಟಿಗಳು. ಜೂನ್-2002 ರ ಅಂತ್ಯಕ್ಕೆ ರೂ. 521.00 ಕೋಟಿಗಳನ್ನು ವಿನಿಯೋಗಿಸಲಾಗಿದೆ.

ಆ) ಈ ಯೋಜನೆಯಡಿ ಬೆಂಗಳೂರು, ಮೈಸೂರು ಮತ್ತು ಬೆಳಗಾಂ ವಿಭಾಗದಲ್ಲಿಯ 200 ಮತ್ತು ಗುಲ್ಬರ್ಗಾ ವಿಭಾಗದ 4 ಆಸ್ಪತ್ರೆಗಳು ಸೇರಿದಂತೆ ಒಟ್ಟು 204 ದ್ವಿತೀಯ ಹಂತದ ಆಸ್ಪತ್ರೆಗಳನ್ನು ಅಭಿವೃದ್ಧಿಗಾಗಿ ಆಳವಡಿಸಿಕೊಳ್ಳಲಾಗಿದೆ. ಇದುವರೆವಿಗೆ 178 ಆಸ್ಪತ್ರೆಗಳ ಕಾಮಗಾರಿ ಪೂರ್ಣಗೊಂಡಿದೆ. ಉಳಿದ 26 ಆಸ್ಪತ್ರೆ ಕಾಮಗಾರಿಗಳ ಪ್ರಗತಿ ವಿವಿಧ ಹಂತದಲ್ಲಿದೆ. ಮಾರ್ಚ್ 2003 ರೊಳಗೆ ಪೂರ್ಣಗೊಳಿಸಲು ಉದ್ದೇಶಿಸಿದೆ.